# 4. ಭಾಗ್ಯಶಿಲ್ಪಿಗಳು

# (1. ನಾಲ್ವಡಿ ಕೃಷ್ಣರಾಜ ಒಡೆಯರು, 2. ಸರ್.ಎಂ. ವಿಶ್ವೇಶ್ವರಯ್ಯ)

**ಪಠ್ಯಪುಸ್ತಕ ರಚನಾ ಸಮಿತಿ ಮತ್ತು ಡಿ.ಎಸ್.ಜಯಪ್ಪಗೌಡ**

## ಕವಿ – ಕಾವ್ಯ ಪರಿಚಯ



**ಡಿ.ಎಸ್.ಜಯಪ್ಪಗೌಡ**

ಡಿ.ಎಸ್. ಜಯಪ್ಪಗೌಡ ಇವರು **ಕ್ರಿ.ಶ. 1947** ರಲ್ಲಿ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ **ದಾರದಹಳ್ಳಿಯಲ್ಲಿ** ಜನಿಸಿದರು. **ದಾರದಹಳ್ಳಿ ಸುಬ್ಬೇಗೌಡ ಜಯಪ್ಪಗೌಡ** ಎಂಬುದು ಇವರ ಪೂರ್ಣ ಹೆಸರು.

**ಕರ್ನಾಟಕ ಗ್ರಾಮೀಣ ಸಂಸ್ಥೆಗಳು, ಕರ್ನಾಟಕದ ಕಡಲಾಚೆಯ ಸಂಪರ್ಕಗಳು, ಮೈಸೂರು ಒಡೆಯರು. ಜನಪದ ಆಟಗಳು, ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು** ಇವರ ಪ್ರಮುಖ ಕೃತಿಗಳು.

ಕರ್ನಾಟಕದ ಕಡಲಾಚೆಯ ಸಂಪರ್ಕಗಳು ಕೃತಿಗೆ **ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ** ಲಭಿಸಿದೆ. ಧಾರವಾಡ ಕರ್ನಾಟಕ ಸಂಘದ ಸಂಶೋಧನಾ ಬಹುಮಾನಕ್ಕೆ ಭಾಜನರಾಗಿದ್ದಾರೆ.

## ಪಾಠದ ಆಶಯ ಭಾವ

ಹುಟ್ಟಿದವರೆಲ್ಲರಿಗೂ ಸಾಧಕರಾಗುವುದಕ್ಕೆ ಅವಕಾಶವಿದ್ದರೂ ಎಲ್ಲರೂ ಸಾಧಕರಾಗುವುದಿಲ್ಲ. ಸಾಧಕರಾಗುವುದಕ್ಕೆ ಅಪಾರವಾದ ಸಾಮಾಜಿಕ ಹೊಣೆಗಾರಿಕೆ, ಪರಿಶ್ರಮ, ಭವಿಷ್ಯಚಿಂತನೆ, ಛಲವಂತಿಕೆ ಬೇಕಾಗುತ್ತದೆ. ಸಾಧನೆಯ ಪಥದಲ್ಲಿ ಎದುರಾಗುವ ಅಡ್ಡಿಆತಂಕಗಳನ್ನು ನಿವಾರಿಸಿಕೊಳ್ಳಬೇಕು. ಇಂತಹ ಅಪರೂಪದ ಸಾಧಕರನ್ನು ಸಮಾಜ ನಿತ್ಯ ಸ್ಮರಿಸುತ್ತದೆ. ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆಡಳಿತಾತ್ಮಕವಾಗಿ, ವೈಜ್ಞಾನಿಕವಾಗಿ ಸಾಧನೆ ಮಾಡಿ ಕನ್ನಡನಾಡಿನ ಅಭಿವೃದ್ಧಿಗಾಗಿ ಸೇವೆ ಸಲ್ಲಿಸಿರುವ ವ್ಯಕ್ತಿಗಳ ಜೀವನ ಮತ್ತು ಸಾಧನೆಗಳನ್ನು ಪರಿಚಯಮಾಡಿ ಕೊಡುವುದು ಇಲ್ಲಿನ ಆಶಯ. ಪರಿಶ್ರಮ, ಪ್ರತಿಭೆ, ನಿಷ್ಠೆಯಿದ್ದರೆ, ಧ್ಯೇಯವನ್ನು ಸಾಧಿಸುತ್ತೇನೆಂಬ ದೃಢಸಂಕಲ್ಪವಿದ್ದರೆ ಸವಾಲುಗಳನ್ನು ಎದುರಿಸಿ ಯಶಸ್ಸು ಪಡೆಯಬಹುದು. ಬಡತನದ ಬವಣೆಯಾಗಲಿ, ಯಾವುದೇ ತಾರತಮ್ಯವಾಗಲಿ ಅದನ್ನು ನಿರ್ಬಂಧಿಸಲಾರದು. ವ್ಯಕ್ತಿತ್ವದ ವಿಕಾಸಕ್ಕೆ ಅಡ್ಡಿಯಾಗಲಾರವು. ವ್ಯಕ್ತಿಯು ಸಮಾಜಮುಖಿಯಾಗಿ ಲಭಿಸಿದ ಅಧಿಕಾರವನ್ನು ಸಮರ್ಥವಾಗಿ ಬಳಕೆ ಮಾಡಿಕೊಂಡಾಗ ಜನಮನದಲ್ಲಿ ಶಾಶ್ವತ ಸ್ಥಾನ ಪಡೆಯಬಹುದೆಂಬುದಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರು ಮತ್ತು ಸರ್.ಎಂ. ವಿಶ್ವೇಶ್ವರಯ್ಯ ಅವರು ಪ್ರತ್ಯಕ್ಷ ಸಾಕ್ಷಿಯಾಗಿದ್ದಾರೆ. ಉತ್ಕರ್ಷದ ಆಕಾಂಕ್ಷೆ ಇದ್ದವರಿಗೆ ಜೀವಂತ ಆದರ್ಶ ವ್ಯಕ್ತಿತ್ವದ ಪರಿಚಯ ಮಾದರಿಯಾಗಬಲ್ಲದು. ಬಹುಮುಖಿತ್ವದ ಅನುಭವವಾಗಬಲ್ಲದು.

## ಭಾಗ್ಯಶಿಲ್ಪಿಗಳು ಪಾಠದ ಸಂಕ್ಷಿಪ್ತ ಪರಿಚಯ

### 1. ನಾಲ್ವಡಿ ಕೃಷ್ಣರಾಜ ಒಡೆಯರು



ಮೈಸೂರು ಸಂಸ್ಥಾನದ 24ನೇ ರಾಜರಾದ **ನಾಲ್ವಡಿ ಕೃಷ್ಣರಾಜ ಒಡೆಯರು 1895ರಲ್ಲಿ ಪಟ್ಟಾಭಿಷಿಕ್ತರಾದರು.** ಇವರು ಪಟ್ಟಾಭಿಷಿಕ್ತರಾಗಿದ್ದಾಗ 10 ವರ್ಷದ ಬಾಲಕರಾಗಿದ್ದರು. ಆದ್ದರಿಂದ ಅವರ ತಾಯಿಯಾದ ಮಹಾರಾಣಿ ವಾಣಿ ವಿಲಾಸಮ್ಮನವರು ರೀಜೆಂಟರಾಗಿ (ಪ್ರತಿನಿಧಿಯಾಗಿ) ಆಡಳಿತ ನಿರ್ವಹಣೆ ಮಾಡಿದರು. ರಾಜಕುಮಾರನಿಗೆ ಸೂಕ್ತ ವಿದ್ಯಾಭ್ಯಾಸ, ಆಡಳಿತ ತರಬೇತಿ ಇವುಗಳನ್ನು ಮಹಾರಾಣಿಯವರು ತೀವ್ರ ನಿಗಾವಹಿಸಿ ನಡೆಸಿದುದರ ಪರಿಣಾಮವಾಗಿ, ಮೈಸೂರು ರಾಜ್ಯಕ್ಕೆ ಒಬ್ಬ ಸಮರ್ಥ ಆಡಳಿತಗಾರರಾಗಿ ನಾಲ್ವಡಿ ಕೃಷ್ಣರಾಜ ಒಡೆಯರು ದೊರಕಿದರು.

1902ರ ಆಗಸ್ಟ್ 8ನೇ ತಾರೀಖಿನಿಂದ ಮೈಸೂರು ರಾಜ್ಯದ ನೇರ ಉಸ್ತುವಾರಿ ಕೃಷ್ಣರಾಜ ಒಡೆಯರ ಸುಪರ್ದಿಗೆ ಬಂದಿತು. ಆಗ ದಿವಾನರಾಗಿದ್ದ ಸರ್. ಕೆ. ಶೇಷಾದ್ರಿ ಅಯ್ಯರ್‌ರವರ ಸಹಕಾರದೊಡನೆ ನಾಲ್ವಡಿ **ಕೃಷ್ಣರಾಜ ಒಡೆಯರು ಮೈಸೂರು ರಾಜ್ಯದ ಸರ್ವೋತೋಮುಖ ಅಭಿವೃದ್ಧಿಗೆ ಕಂಕಣಬದ್ಧರಾದರು.** ಇವರ ಕಾಲದಲ್ಲಿ ಇಡೀ ಭರತ ಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು ಕಂಡುದರಿಂದ, **ಮೈಸೂರು ಸಂಸ್ಥಾನಕ್ಕೆ 'ಮಾದರಿ ಮೈಸೂರು' ಎಂಬ ಕೀರ್ತಿ ಪ್ರಾಪ್ತವಾಯಿತು.**

ನಾಲ್ವಡಿ ಕೃಷ್ಣರಾಜ ಒಡೆಯರು 1923ರಲ್ಲಿ ಹೊಸ ಕಾನೂನೊಂದನ್ನು ಜಾರಿಗೆ ತಂದು **ಪ್ರಜಾಪ್ರತಿನಿಧಿ ಸಭೆ** ಯನ್ನು ಶಾಸನಬದ್ಧ ಸಂಸ್ಥೆಯನ್ನಾಗಿ ಮಾರ್ಪಡಿಸಿದರು. ಪ್ರಜಾ ಪ್ರತಿನಿಧಿ ಸಭೆಯು ವರ್ಷಕ್ಕೆ ಎರಡು ಬಾರಿ (1.ಜೂನ್ – ಮಹಾರಾಜರ ವರ್ಧಂತಿ, 2.ಅಕ್ಟೋಬರ್ – ದಸರಾ ಮಹೋತ್ಸವ)ಸಮಾವೇಶಗೊಂಡು ಕಲಾಪಗಳನ್ನು ನಡೆಸುತ್ತಿತ್ತು. ಅಲ್ಲಿ ವಾರ್ಷಿಕ ಆಯವ್ಯಯ ಪರಿಶೀಲನೆ, ಪ್ರಶ್ನೋತ್ತರಗಳು, ಠರಾವುಗಳನ್ನು ಮಂಡಿಸುವುದು ಮುಂತಾದ ಸಂಸದೀಯ ಮಾದರಿಯ ನಡವಳಿಕೆಗಳು ನಡೆಯುತ್ತಿದ್ದವು.

ನಾಲ್ವಡಿ ಕೃಷ್ಣರಾಜ ಒಡೆಯರು 1907 ರಲ್ಲಿ **ನ್ಯಾಯ ವಿಧಾಯಕ ಸಭೆ**ಯನ್ನೂ ಸಹ ಸ್ಥಾಪಿಸಿದರು. ಮೇಲ್ಮನೆಯ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಈ ಸಂಸ್ಥೆ, ಜೂನ್ ಮತ್ತು ಡಿಸೆಂಬರ್ ತಿಂಗಳುಗಳಲ್ಲಿ ಬೆಂಗಳೂರಿನಲ್ಲಿ ಸಮಾವೇಶಗೊಳ್ಳುತ್ತಿತ್ತು. ಪ್ರಜಾಪ್ರತಿನಿಧಿ ಸಭೆಯಲ್ಲಿ ಮಂಡಿಸಿದ ಎಲ್ಲ ವಿಷಯಗಳನ್ನೂ ಸಹ ವಿಮರ್ಶಿಸುವ ಅಧಿಕಾರ ಆ ಸಭೆಗೆ ಇದ್ದಿತು. ಮುಖ್ಯವಾಗಿ ಯಾವುದೇ ಕಾನೂನನ್ನು ಜಾರಿಗೊಳಿಸಲು ಆ ಸಭೆಯ ಅನುಮತಿ ಅಗತ್ಯವಾಗಿತ್ತು. ಆ ಸಭೆಗೆ ಸರ್ಕಾರದ ಖರ್ಚುಗಳನ್ನು ಕಡಿಮೆ ಮಾಡುವ ಅಧಿಕಾರ ಸಹ ಇದ್ದಿತು.

**ನಾಲ್ವಡಿ ಕೃಷ್ಣರಾಜ ಒಡೆಯರು ಕಾಲದಲ್ಲಿ 1. ಗ್ರಾಮ ನಿರ್ಮಲೀಕರಣ 2. ವೈದ್ಯ ಸಹಾಯ 3. ವಿದ್ಯಾ ಪ್ರಚಾರ 4. ನೀರಿನ ಸೌಕರ್ಯ 5. ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು.** ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವನ್ನಾಗಿ ರೂಪಿಸಿದರು. ಸಾಹಿತ್ಯ, ಸಂಗೀತ, ವಾಸ್ತುಶಿಲ್ಪಗಳ ಅಭಿವೃದ್ಧಿಗೆ ಒತ್ತು ನೀಡಿದರು.

ಮೈಸೂರು – ಅರಸೀಕೆರೆ, ಬೆಂಗಳೂರು– ಚಿಕ್ಕಬಳ್ಳಾಪುರ, ಚಿಕ್ಕಜಾಜೂರು– ಚಿತ್ರದುರ್ಗ, ನಂಜನಗೂಡು– ಚಾಮರಾಜನಗರ, ತರೀಕೆರೆ – ಶಿವಮೊಗ್ಗ– ಆನಂದಪುರ ಈ ಎಲ್ಲ ರೈಲು ಮಾರ್ಗಗಳನ್ನು 1931ರ ವೇಳೆಗೆ ಪೂರ್ಣಗೊಳಿಸಲಾಯಿತು.

ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ 1900ರಲ್ಲಿ ಶಿವನಸಮುದ್ರದ ಬಳಿ ಕಾವೇರಿ ನದಿ ನೀರಿನಿಂದ ಪ್ರಾರಂಭಿಸಿದ **ಶಿವನಸಮುದ್ರ ಜಲವಿದ್ಯುತ್ ಯೋಜನೆ ಏಷ್ಯಾ ಖಂಡದಲ್ಲೇ ಮೊದಲು ಪ್ರಾರಂಭಿಸಿದ ಜಲವಿದ್ಯುತ್ ಯೋಜನೆಯಾಗಿದೆ. 1907ರಲ್ಲಿ ವಾಣಿ ವಿಲಾಸ ಸಾಗರ ಆಣೆಕಟ್ಟು (ಮಾರಿ ಕಣಿವೆ ಚಿತ್ರದುರ್ಗ)** ಮತ್ತು 1911ರಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಕನ್ನಾಂಬಾಡಿಯಲ್ಲಿ ಕೃಷ್ಣರಾಜ ಸಾಗರ (KRS ಮಂಡ್ಯ ಜಿಲ್ಲೆ) ಆಣೆಕಟ್ಟು ನಿರ್ಮಾಣ ಮಾಡಿದ್ದರಿಂದ ವಿದ್ಯುತ್ ಮತ್ತು ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು.

  

ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಪ್ರಾಥಮಿಕ ಮತ್ತು ಮಾಧ್ಯಮಿಕ ವಿದ್ಯಾಭ್ಯಾಸವನ್ನು ಉಚಿತ ಮತ್ತು ಕಡ್ಡಾಯವಾಗಿ ಪ್ರಾರಂಭಿಸಲಾಯಿತು. ನಾಡಿನಲ್ಲೇ ಮೊಟ್ಟಮೊದಲ ವಿಶ್ವವಿದ್ಯಾನಿಲಯವಾದ ಮೈಸೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿದರು. ಬೆಂಗಳೂರಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತನ್ನು ಪ್ರಾರಂಭಿಸಿದರು. ಮೈಸೂರು ಬ್ಯಾಂಕಿನ ಸ್ಥಾಪನೆ ಮಾಡಲಾಯಿತು. ಉಚಿತ ಆಸ್ಪತ್ರೆಗಳು ಕಾರ್ಯಾರಂಭ ಮಾಡಿದವು. 1906ರಲ್ಲಿ ಸಹಕಾರ ಸಂಘಗಳನ್ನು ಸ್ಥಾಪಿಸಲಾಯಿತು.

  

1909 – ದೇವದಾಸಿ ಪದ್ಧತಿ ನಿಷೇಧ, 1910– ಬಸವಿ ಪದ್ದತಿ ರದ್ಧತಿ, ಗೆಜ್ಜೆ ಪೂಜೆ ಪದ್ದತಿ ಸಂಪೂರ್ಣ ನಿರ್ಮೂಲನೆ, 1936 – ವೇಶ್ಯಾ ವೃತ್ತಿ ತಡೆಗಟ್ಟುವ ಕಾಯ್ದೆ; ವಿಧವಾ ಮರು ವಿವಾಹ ಕಾಯ್ದೆ, ಸ್ತ್ರೀಯರಿಗೆ ಕಡ್ಡಾಯ ಶಿಕ್ಷಣ ಜಾರಿ, 1914ರಲ್ಲಿ ಶಾಲಾ ಪ್ರವೇಶಕ್ಕೆ ಜಾತಿ ಪರಿಗಣನೆಯ ನಿಷೇಧ, 1919– ಮಾಧ್ಯಮಿಕ ಶಾಲಾ ಶಿಕ್ಷಣ ಶುಲ್ಕ ರದ್ಧತಿ, 1927 – ಮೊಟ್ಟ ಮೊದಲ ಬಾರಿಗೆ ಸ್ತ್ರೀಯರಿಗೆ ಮತದಾನದ ಹಕ್ಕು, 1905 – ಸಹಕಾರಿ ಕಾರ್ಮಿಕ ಪರಿಹಾರ ಕಾಯ್ದೆ, 1913 – ಮೈಸೂರು ಗ್ರಾಮ ನ್ಯಾಯಾಲಯ ಕಾಯ್ದೆ, 1918 – ಗ್ರಾಮ ಪಂಚಾಯಿತಿಗಳ ಕಾಯ್ದೆಗಳನ್ನು ಜಾರಿಗೆ ತಂದು **'ಸಾಮಾಜಿಕ ಕಾನೂನುಗಳ ಹರಿಕಾರ'** ಎಂದು ಹೆಸರಾದರು.

## 2. ಸರ್ ಎಂ. ವಿಶ್ವೇಶ್ವರಯ್ಯ

 

ಬೆಂಗಳೂರಿನಲ್ಲಿ ವಿಶ್ವೇಶ್ವರಯ್ಯನವರ ಶತಮಾನೋತ್ಸವ ಸಮಾರಂಭ ನಡೆಯಿತು. ಆ ಕಾರ್ಯಕ್ರಮದಲ್ಲಿ ಅಂದಿನ ಭಾರತದ ಪ್ರಧಾನ ಮಂತ್ರಿಗಳಾಗಿದ್ದ ಪಂಡಿತ್ ಜವಾಹರಲಾಲ್ ನೆಹರೂರವರು ಭಾಗವಹಿಸಿದ್ದರು. ನೆಹರೂ ಅವರು ಸರ್.ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ **"ದುರದೃಷ್ಟವಶಾತ್ ಭಾರತೀಯರಾದ ನಾವು ಹೆಚ್ಚು ಮಾತನಾಡುವವರು ಮತ್ತು ನುಡಿದಂತೆ ನಡೆಯಲಾರದವರೆಂಬ ದೂಷಣೆಗೆ ಒಳಗಾಗಿದ್ದೇವೆ. ತಾವು ಈ ಮಾತಿಗೆ ಬಹುದೊಡ್ಡ ರೀತಿಯಲ್ಲಿ ಹೊರತಾಗಿದ್ದೀರಿ. ತಾವು ಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ. ಅದನ್ನು ನಾವು ತಮ್ಮಿಂದ ಕಲಿಯೋಣ".** ಎಂದು ಹೇಳಿದರು.



ವಿಶ್ವೇಶ್ವರಯ್ಯ ಅವರು 1860 ಸೆಪ್ಟೆಂಬರ್ 15ರಂದು ಶ್ರೀನಿವಾಸಶಾಸ್ತ್ರಿ ಮತ್ತು ವೆಂಕಟಲಕ್ಷ್ಮಮ್ಮ ಅವರ ಎರಡನೆಯ ಮಗನಾಗಿ ಜನಿಸಿದರು. ವಿಶ್ವೇಶ್ವರಯ್ಯನವರ ಪೂರ್ವಜರು ಮೂಲತಃ ಕರ್ನೂಲು ಜಿಲ್ಲೆ ಗಿಡ್ಡಲೂರು ತಾಲೂಕಿನ 'ಮೋಕ್ಷಗೊಂಡಂ' ಅಗ್ರಹಾರಕ್ಕೆ ಸೇರಿದವರು. ಕಾರಣಾಂತರದಿಂದ ಕರ್ನಾಟಕಕ್ಕೆ ವಲಸೆ ಬಂದು ಚಿಕ್ಕಬಳ್ಳಾಪುರ ಸಮೀಪದಲ್ಲಿರುವ ಮುದ್ದೇನಹಳ್ಳಿಯಲ್ಲಿ ನೆಲೆಸಿದರು. ವೆಂಕಟಲಕ್ಷ್ಮಮ್ಮ ಅವರಿಗೆ ಮಕ್ಕಳು ಹೆಚ್ಚು ಓದಿ ದೊಡ್ಡ ವ್ಯಕ್ತಿಗಳಾಗಬೇಕೆಂಬ ಹಂಬಲವಿತ್ತು. ಅದಕ್ಕಾಗಿ ಸಂಸಾರವನ್ನು ಚಿಕ್ಕಬಳ್ಳಾಪುರಕ್ಕೆ ಸ್ಥಳಾಂತರಿಸಿದರು.



ವಿಶ್ವೇಶ್ವರಯ್ಯ ಅವರ ಪ್ರಾಥಮಿಕ ಶಿಕ್ಷಣ ಚಿಕ್ಕಬಳ್ಳಾಪುರದಲ್ಲಿ ನಡೆಯಿತು. ಸೋದರಮಾವ ಎಚ್.ರಾಮಯ್ಯ ಅವರ ಮಾರ್ಗದರ್ಶನದಂತೆ ಬೆಂಗಳೂರಿನ ವೆಸ್ಲಿಯನ್ ಪ್ರೌಢಶಾಲೆಯಲ್ಲಿ ಪ್ರೌಢಶಿಕ್ಷಣವನ್ನೂ ಸೆಂಟ್ರಲ್ ಕಾಲೇಜಿನಲ್ಲಿ ಎರಡು ವರ್ಷಗಳ ಇಂಟರ್ ಮೀಡಿಯಟ್ ಮತ್ತು ಮೂರು ವರ್ಷಗಳ ಬಿ.ಎ. ಪದವಿ ಶಿಕ್ಷಣವನ್ನೂ ಪಡೆದರು. ಅಂದಿನ ಮೈಸೂರು ದಿವಾನರಾಗಿದ್ದ ಸಿ.ರಂಗಾಚಾರ್ಲುರವರು ನೀಡಿದ ವಿದ್ಯಾರ್ಥಿ ವೇತನ ಸೌಲಭ್ಯವನ್ನು ಬಳಸಿಕೊಂಡು ಪೂನಾದ ಎಂಜಿನಿಯರಿಂಗ್ ಕಾಲೇಜಿನಲ್ಲಿ ಡಿಪ್ಲೊಮಾ ಶಿಕ್ಷಣವನ್ನು ಪ್ರಥಮ ಸ್ಥಾನದಲ್ಲಿ ಪಡೆದು ಜೇಮ್ಸ್ ಬರ್ಕ್ಲಿ ಬಹುಮಾನಕ್ಕೂ ಪಾತ್ರರಾದರು.

ವಿಶ್ವೇಶ್ವರಯ್ಯನವರು 1884 ರಲ್ಲಿ ಮುಂಬೈ ಪ್ರಾಂತ್ಯದ ಲೋಕೋಪಯೋಗಿ ಇಲಾಖೆಯಲ್ಲಿ ಸಹಾಯಕ ಎಂಜಿನಿಯರ್ ಆಗಿ ಸೇವೆ ಪ್ರಾರಂಭಿಸಿದರು. ಖಾನ್‌ದೇಶ ಮತ್ತು ನಾಸಿಕ್ ಜಿಲ್ಲೆಗಳಲ್ಲಿ ಹರಿಯುತ್ತಿದ್ದ ಪಂಜ್ರಾ ನದಿಯ ನೀರಾವರಿ ಕಾಲುವೆಗೆ ತೂಬು ಮೇಲ್ಗಾಲುವೆಯನ್ನು ನಿರ್ಮಿಸುವ ಕಾರ್ಯದಲ್ಲಿ ಯಶಸ್ಸು ಗಳಿಸಿ ಮೇಲಾಧಿಕಾರಿಗಳ ಮೆಚ್ಚುಗೆಗೆ ಪಾತ್ರರಾದರು. ಮುಂಬೈ ಸರ್ಕಾರದ ಸೂಚನೆಯ ಮೇರೆಗೆ ಸಿಂಧ್ ಪ್ರಾಂತ್ಯದ ಸುಕ್ಕೂರು ಪಟ್ಟಣಕ್ಕೆ ಕುಡಿಯುವ ನೀರಿನ ಪೂರೈಕೆಯ ಕಾರ್ಯವನ್ನು ಯಶಸ್ವಿಯಾಗಿ ಪೂರೈಸಿದರು. ಅಂದಿನ ಮುಂಬೈ ಪ್ರಾಂತ್ಯದ ಗವರ್ನರ್ ಆಗಿದ್ದ **ಲಾರ್ಡ್ ಸಂಡ್ ಹರ್ಸ್ಟ್** ಅವರು ಇವರನ್ನು ಮುಕ್ತಕಂಠದಿಂದ ಹಾಡಿಹೊಗಳಿದರು.

ವಿಶ್ವೇಶ್ವರಯ್ಯನವರು ಪೂನಾದ ಮುಥಾ ಕಾಲುವೆಗೆ ನೀರಿನ ನೆಲೆಯಾಗಿದ್ದ ಫೀಫ್ ಜಲಾಶಯಕ್ಕೆ ಸ್ವಯಂಚಾಲಿತ ಬಾಗಿಲುಗಳನ್ನು ಅಳವಡಿಸಿದರು. **ಸ್ವಯಂಚಾಲಿತ ಬಾಗಿಲುಗಳ ಅನ್ವೇಷಣೆ ವಿಶ್ವೇಶ್ವರಯ್ಯ ಅವರ ಸಾಧನೆಯ ಕಿರೀಟಕ್ಕೆ ಮತ್ತೊಂದು ಗರಿಯನ್ನು ಸೇರಿಸಿತು.**

ಇದನ್ನೇ ಮುಂದೆ ಗ್ವಾಲಿಯರ್‌ನ ತಿಗ್ರ ಜಲಾಶಯಕ್ಕೂ ಮೈಸೂರಿನ ಕೃಷ್ಣರಾಜಸಾಗರ (ಈಗಿನ ಮಂಡ್ಯ ಜಿಲ್ಲೆಯ) ಜಲಾಶಯಕ್ಕೂ ಅಳವಡಿಸಲಾಯಿತು. ಮುಂದೆ ನಾಲ್ಕು ವರ್ಷಗಳ ಕಾಲ ಮುಂಬೈ ಪ್ರಾಂತ್ಯದ ಸ್ಯಾನಿಟರಿ ಎಂಜಿನಿಯರ್ ಆಗಿ ನೇಮಕಗೊಂಡರು. ಈ ಹುದ್ದೆಗೆ ನೇಮಕವಾದ ಪ್ರಥಮ ಭಾರತೀಯರು ಎಂಬುದು ಗಮನಾರ್ಹ ಅಂಶ.

ಹೈದರಾಬಾದ್ ನಗರಕ್ಕೆ ಈಸಿ ಮತ್ತು ಮೂಸಿ ನದಿಗಳ ಪ್ರವಾಹದಿಂದ ಅಪಾರ ನಷ್ಟ ಸಂಭವಿಸುತ್ತಿತ್ತು. ಅದನ್ನು ತಡೆಯಲು ಎರಡು ನದಿಗಳಿಗೂ ಪ್ರತ್ಯೇಕ ಜಲಾಶಯ ನಿರ್ಮಿಸುವುದರ ಮೂಲಕ ಸಮಸ್ಯೆಯನ್ನು ಬಗೆಹರಿಸಿದರು. ಹೈದರಾಬಾದ್ ನಗರವನ್ನು ಭಾರತದ ಸುಯೋಜಿತ ನಗರಗಳ ಸಾಲಿಗೆ ಸೇರ್ಪಡೆಯಾಗುವಂತೆ ಮಾಡಿದರು.

ವಿಶ್ವೇಶ್ವರಯ್ಯ ಅವರು ಮೂರು ವರ್ಷಗಳ ಕಾಲ ಮೈಸೂರು ಸಂಸ್ಥಾನದಲ್ಲಿ ಮುಖ್ಯ ಎಂಜಿನಿಯರ್ ಆಗಿ ಕಾರ್ಯ ನಿರ್ವಹಿಸಿದರು. ಕಾವೇರಿ ನದಿಗೆ ಕನ್ನಂಬಾಡಿ ಜಲಾಶಯ ನಿರ್ಮಾಣ ಯೋಜನೆ ಪ್ರಾರಂಭ, ರೈಲು ಮಾರ್ಗಗಳ ವಿಸ್ತರಣೆಗೆ ಕ್ರಮ, ತಾಂತ್ರಿಕ ಶಿಕ್ಷಣದ ಅಭಿವೃದ್ಧಿಗೆ ಯೋಜನೆ, ಮಾರಿಕಣಿವೆ ಜಲಾಶಯದ ನೀರು ಹಂಚಿಕೆಯ ಪುನರ್ವ್ಯವಸ್ಥೆ, ಸಣ್ಣ ನೀರಾವರಿ ವ್ಯವಸ್ಥೆಗೆ ಮರುಜೀವ, ಇವೆಲ್ಲ ಅವರ ಅಭಿವೃದ್ಧಿ ಕಾರ್ಯಗಳ ಕುರುಹು.

ಮೈಸೂರು ಸಂಸ್ಥಾನದ ಮಹಾರಾಜರಾಗಿದ್ದ **ನಾಲ್ವಡಿ ಕೃಷ್ಣರಾಜ ಒಡೆಯರು ವಿಶ್ವೇಶ್ವರಯ್ಯ ಅವರನ್ನು ದಿವಾನರನ್ನಾಗಿ ನೇಮಿಸಿದರು.** ಆಡಳಿತದಲ್ಲಿ ಹೊಸ ಮಾದರಿಯನ್ನು ಅನುಷ್ಠಾನಗೊಳಿಸಿ ಕಚೇರಿಯ ಕೆಲಸ ಕಾರ್ಯಗಳಲ್ಲಿ ಸುಧಾರಣೆ ತಂದರು. ಅಷ್ಟೆ ಅಲ್ಲದೆ ದಕ್ಷತೆ ಮತ್ತು ಪ್ರಾಮಾಣಿಕತೆಗೆ ಒತ್ತು ನೀಡಿದರು. ಸಂಸ್ಥಾನದಲ್ಲಿ ಸ್ಥಳೀಯ ಮಟ್ಟದಲ್ಲಿ ಕೇಂದ್ರೀಕೃತವಾಗಿದ್ದ ನ್ಯಾಯಾಂಗ ಮತ್ತು ಕಾರ್ಯಾಂಗಗಳ ಅಧಿಕಾರವನ್ನು ಪ್ರತ್ಯೇಕಗೊಳಿಸಿದರು. ಗಾಂಧೀಜಿ ಅವರು ಮೈಸೂರಿನ ಆಡಳಿತ ರೀತಿಯನ್ನು ಮುಕ್ತಕಂಠದಿಂದ ಹೊಗಳಿದರು. ಇದರಿಂದ 'ಮೈಸೂರು ಮಾದರಿ' ಎಂಬ ಹೊಸ ಆಡಳಿತ ಮಾದರಿ ಜನ್ಮತಾಳಿತು.





**ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರ, ಶಿಕ್ಷಣವು ಸಂಜೀವಿನಿ ಎಂಬುದನ್ನು ಅರಿತಿದ್ದ ಇವರು "ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು" ಎಂದು ಹೇಳಿದ್ದಾರೆ. ಅದಕ್ಕಾಗಿ ಅವರು ಶಿಕ್ಷಣದ ವಿವಿಧ ಯೋಜನೆಗಳನ್ನು ರೂಪಿಸಿದರು.** 1913 ರಲ್ಲಿ ಪ್ರಾಥಮಿಕ ಶಿಕ್ಷಣ ನಿಬಂಧನೆಯನ್ನು ಜಾರಿಗೆ ತಂದರು. ಪ್ರೌಢಶಿಕ್ಷಣ ಶಾಲೆಗಳು ಮದ್ರಾಸ್ ವಿಶ್ವವಿದ್ಯಾನಿಲಯದ ನಿಯಂತ್ರಣಕ್ಕೆ ಒಳಪಟ್ಟಿದ್ದವು. ಇದನ್ನು ಬದಲಿಸಿ ಮೈಸೂರು ಸಂಸ್ಥಾನವೇ ಪ್ರತ್ಯೇಕವಾದ ಪ್ರೌಢಶಿಕ್ಷಣದ ಅಂತಿಮ ಪರೀಕ್ಷೆ ನಡೆಸುವ ಯೋಜನೆಯನ್ನು ಆರ್ಥಿಕ ಪರಿಷತ್ತಿನ ಮೂಲಕ ರೂಪುಗೊಳಿಸಿದರು. ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪನೆ ಇವರ ಕಾಲದಲ್ಲಾಯಿತು. ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿದರು. ಇದಕ್ಕಾಗಿಯೇ ಬೆಂಗಳೂರಿನಲ್ಲಿ ಮೆಕಾನಿಕಲ್ ಎಂಜಿನಿಯರಿಂಗ್ ಶಾಲೆ, ಮೈಸೂರಿನಲ್ಲಿ ಚಾಮರಾಜೇಂದ್ರ ತಾಂತ್ರಿಕ ಸಂಸ್ಥೆಗಳನ್ನು ಪ್ರಾರಂಭಿಸಿದರು. **'ಕನ್ನಡ ಸಾಹಿತ್ಯ ಪರಿಷತ್ತನ್ನು'** ಸ್ಥಾಪಿಸಿದ್ದು ಇವರ ಕಾಲದ ಮತ್ತೊಂದು ಮಹತ್ವದ ಸಾಧನೆಯಾಗಿದೆ.

ವಿಶ್ವೇಶ್ವರಯ್ಯ ಅವರು ಕೈಗಾರಿಕೆಗೆ ಅಗ್ರ ಪ್ರಾಶಸ್ತ್ಯ ನೀಡಿದ್ದರು. **"ಕೈಗಾರಿಕೀಕರಣ ಇಲ್ಲವೆ ಅವನತಿ"** ಎಂಬ ಘೋಷಣೆ ಮಾಡಿದರು. ಇವರ ಕಾಲದಲ್ಲಿ ಭದ್ರಾವತಿಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಯನ್ನು ಸ್ಥಾಪಿತವಾಯಿತು. ಇದಲ್ಲದೆ ಹೆಂಚಿನ ಕಾರ್ಖಾನೆ, ಮೊಳೆ ಮತ್ತು ಗೊಬ್ಬರ ತಯಾರಿಕಾ ಸ್ಥಾವರ, ಸಕ್ಕರೆ ಕಾರ್ಖಾನೆ, ಔಷಧ ತಯಾರಿಕಾ ಘಟಕ, ಗಂಧದ ಎಣ್ಣೆ, ಬೆಂಕಿಕಡ್ಡಿ ಹಾಗೂ ಕಾಗದದ ಕಾರ್ಖಾನೆಗಳು ಸ್ಥಾಪಿತವಾದವು. ಸೋಪು ಹಾಗೂ ಲೋಹ ತಯಾರಿಕೆ, ಕಲೆ ಮತ್ತು ಕರಕುಶಲ ಡಿಪೋ, ಕೃಷ್ಣರಾಜೇಂದ್ರ ಬಟ್ಟೆ ಗಿರಣಿ, ಕಾಗದದ ತಿರುಳು, ರಟ್ಟು, ಪೆನ್ಸಿಲ್, ಬೆಂಕಿಕಡ್ಡಿ ಮತ್ತು ಪೀಠೋಪಕರಣಗಳ ತಯಾರಿಕಾ ಘಟಕಗಳು –ಹೀಗೆ ನೂರಾರು ಕೈಗಾರಿಕೆಗಳು ಪ್ರಾರಂಭಗೊಂಡವು.

ವಿಶ್ವೇಶ್ವರಯ್ಯನವರು ಹಣಕಾಸು ನೀತಿಯಲ್ಲಿ ಸಾಕಷ್ಟು ಮಾರ್ಪಾಡು ಮಾಡಿದರು. ಇದಕ್ಕಾಗಿ 1913 ರಲ್ಲಿ ಮೈಸೂರು ಬ್ಯಾಂಕನ್ನು ಸ್ಥಾಪಿಸಿದರು.. ಕೈಗಾರಿಕೆಗಳ ಅಭಿವೃದ್ಧಿಗೆ ಫೀಡರ್ ಬ್ಯಾಂಕ್ ಹಾಗೂ ಕೈಗಾರಿಕಾ ಹೂಡಿಕೆ ಮತ್ತು ಅಭಿವೃದ್ಧಿ ನಿಧಿಗಳನ್ನು ಸ್ಥಾಪಿಸಿದರು. ಸಾರ್ವಜನಿಕ ಜೀವವಿಮಾ ಯೋಜನೆ ಜಾರಿಗೆ ತಂದರು. ರೈತರಿಗೆ ಹಾಗೂ ಕರಕುಶಲ ಕೆಲಸಗಾರರಿಗೆ ಸಾಲದ ಸೌಲಭ್ಯ ನೀಡಲು ಸಹಕಾರಿ ಕ್ಷೇತ್ರವನ್ನು ಬಲವರ್ಧನೆಗೊಳಿಸಿದರು. ಪ್ರಾಂತೀಯ ಸಹಕಾರಿ ಬ್ಯಾಂಕ್‌ಗಳನ್ನು ಸ್ಥಾಪಿಸಿದರು. ರಾಜ್ಯದ ಆಸ್ತಿಯನ್ನು ಹೆಚ್ಚಿಸಿ, ಆದಾಯ ತರುವುದರ ಮೂಲಕ ಅಭಿವೃದ್ಧಿ ಕಾರ್ಯಗಳ ಪ್ರಭಾವವನ್ನು ಅಳೆಯಲು ಅನುಕೂಲವಾಗುವಂತೆ ಆಯವ್ಯಯದಲ್ಲಿ ಹೊಸ ದೃಷ್ಟಿಕೋನವನ್ನು ಕಂಡುಕೊಂಡರು. ಬ್ರಿಟಿಷ್ ಸರ್ಕಾರ ವಿಶ್ವೇಶ್ವರಯ್ಯ ಅವರಿಗೆ **'ಸರ್'** ಪದವಿಯನ್ನು ನೀಡಿ ಗೌರವಿಸಿತು. ಅವರ ಸಾಧನೆಯನ್ನು ಗುರುತಿಸಿ ಭಾರತ ಸರ್ಕಾರ ದೇಶದ ಅತ್ಯುನ್ನತ **'ಭಾರತ ರತ್ನ'** ಪ್ರಶಸ್ತಿಯನ್ನು ಸಲ್ಲಿಸಿತು. ಮಹಾನ್ ಆಡಳಿತಗಾರರಾದ ಇವರ ಶತಮಾನೋತ್ಸವದ ಸವಿನೆನಪಿಗಾಗಿ ವಿಶೇಷ ಅಂಚೆಚೀಟಿ ಬಿಡುಗಡೆ ಮಾಡಲಾಯಿತು. ವಿಶ್ವೇಶ್ವರಯ್ಯನವರು **'ರಿಕನ್‌ಸ್ಟ್ರಕ್ಟಿಂಗ್ ಇಂಡಿಯಾ'**, 'ಪ್ಲಾನ್ಡ್ ಎಕಾನಮಿ ಫಾರ್ ಇಂಡಿಯ' ಹಾಗೂ ಆತ್ಮಚರಿತ್ರೆ **'ಮೆಮೋರೀಸ್ (Memoirs) ಆಫ್ ಮೈ ವರ್ಕಿಂಗ್ ಲೈಫ್', 'ನೇಷನ್ ಬಿಲ್ಡಿಂಗ್ ಪ್ಲಾನ್ ಫಾರ್ ಇಂಡಿಯಾ'** ಕೃತಿಗಳನ್ನು ಬರೆದು ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿದ್ದಾರೆ. ಸೆಪ್ಟೆಂಬರ್ 15, 1960 ರಂದು ಶತಮಾನೋತ್ಸವ ಅಭಿನಂದನೆ ಕಾರ್ಯಕ್ರಮದಲ್ಲಿ 'ಸರ್ ಎಂ. ವಿ.' ಎಂಬ ಅಭಿನಂದನಾ ಗ್ರಂಥವನ್ನು ಪ್ರಕಟಿಸಲಾಯಿತು. 102 ವರ್ಷಗಳ ತುಂಬು ಜೀವನ ಪೂರೈಸಿದ ಸರ್. ಎಂ. ವಿ. ಅವರು 1962 ರಲ್ಲಿ ಇಹಲೋಕ ತ್ಯಜಿಸಿದರು. **ವಿಶ್ವೇಶ್ವರಯ್ಯ ಅವರ ಹುಟ್ಟು ಹಬ್ಬದ ನೆನಪಿಗಾಗಿ 'ಎಂಜಿನಿಯರ್ಸ್ ದಿನಾಚರಣೆ'ಯನ್ನು ಮಾಡಲಾಗುತ್ತಿದೆ.**

## ಅಭ್ಯಾಸ ಪ್ರಶ್ನೋತ್ತರಗಳು

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದೊಂದು ವಾಕ್ಯಗಳಲ್ಲಿ ಉತ್ತರಿಸಿ.**

**1. ನಾಲ್ವಡಿ ಕೃಷ್ಣರಾಜ ಒಡೆಯರು ಯಾವಾಗ ಪಟ್ಟಾಭಿಷಿಕ್ತರಾದರು?**

**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು ಕ್ರಿ. ಶ. 1895 ರಲ್ಲಿ ಪಟ್ಟಾಭಿಷಿಕ್ತರಾದರು.

**2. ನಾಲ್ವಡಿ ಕೃಷ್ಣರಾಜ ಒಡೆಯರು ಯಾವುದಕ್ಕಾಗಿ ಕಂಕಣಬದ್ಧರಾದರು?**
**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು ಮೈಸೂರು ರಾಜ್ಯದ ಸರ್ವೋತೋಮುಖ ಅಭಿವೃದ್ಧಿಗೆ ಕಂಕಣಬದ್ಧರಾದರು.

**3. ಏಷ್ಯಾ ಖಂಡದಲ್ಲಿಯೇ ಮೊದಲು ಪ್ರಾರಂಭಿಸಿದ ಜಲ ವಿದ್ಯುತ್ ಯೋಜನೆ ಯಾವುದು?**
**ಉತ್ತರ:** ಶಿವನಸಮುದ್ರ ಜಲವಿದ್ಯುತ್ ಯೋಜನೆ ಏಷ್ಯಾ ಖಂಡದಲ್ಲೇ ಮೊದಲು ಪ್ರಾರಂಭಿಸಿದ ಜಲವಿದ್ಯುತ್ ಯೋಜನೆಯಾಗಿದೆ.

**4. ಬ್ರಿಟಿಷ್ ಸರ್ಕಾರ ವಿಶ್ವೇಶ್ವರಯ್ಯ ಅವರಿಗೆ ಯಾವ ಪದವಿಯನ್ನು ನೀಡಿ ಗೌರವಿಸಿತು?**
**ಉತ್ತರ:** ಬ್ರಿಟಿಷ್ ಸರ್ಕಾರ ವಿಶ್ವೇಶ್ವರಯ್ಯ ಅವರಿಗೆ 'ಸರ್' ಪದವಿಯನ್ನು ನೀಡಿ ಗೌರವಿಸಿತು.

**5. ವಿಶ್ವೇಶ್ವರಯ್ಯ ಅವರನ್ನು ದಿವಾನರಾಗಿ ನೇಮಿಸಿದವರು ಯಾರು?**
**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು ವಿಶ್ವೇಶ್ವರಯ್ಯ ಅವರನ್ನು ದಿವಾನರನ್ನಾಗಿ ನೇಮಿಸಿದರು.

**6. ವಿಶ್ವೇಶ್ವರಯ್ಯ ಅವರ ಹುಟ್ಟುಹಬ್ಬದ ನೆನಪಿಗಾಗಿ ಯಾವ ದಿನಾಚರಣೆಯನ್ನು ಮಾಡಲಾಗುತ್ತಿದೆ?**
**ಉತ್ತರ:** ವಿಶ್ವೇಶ್ವರಯ್ಯ ಅವರ ಹುಟ್ಟುಹಬ್ಬದ ನೆನಪಿಗಾಗಿ 'ಎಂಜಿನಿಯರ್ಸ್ ದಿನಾಚರಣೆ' ಯನ್ನು ಮಾಡಲಾಗುತ್ತಿದೆ.

## ಹೆಚ್ಚುವರಿ ಪ್ರಶ್ನೋತ್ತರಗಳು

**7. ನಾಲ್ವಡಿ ಕೃಷ್ಣರಾಜ ಒಡೆಯರು ಬಾಲಕರಾಗಿದ್ದಾಗ ರೀಜೆಂಟರಾಗಿ ಆಡಳಿತ ನಿರ್ವಹಣೆ ಮಾಡಿದವರು ಯಾರು?**
**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು ಬಾಲಕರಾಗಿದ್ದಾಗ ಮಹಾರಾಣಿ ವಾಣಿ ವಿಲಾಸಮ್ಮನವರು ರೀಜೆಂಟರಾಗಿ ಆಡಳಿತ ನಿರ್ವಹಣೆ ಮಾಡಿದರು.

**8. ನಾಲ್ವಡಿ ಕೃಷ್ಣರಾಜ ಒಡೆಯರು ಯಾವಾಗ ನ್ಯಾಯ ವಿಧಾಯಕ ಸಭೆಯನ್ನು ಸ್ಥಾಪಿಸಿದರು?**
**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು 1907 ರಲ್ಲಿ ನ್ಯಾಯ ವಿಧಾಯಕ ಸಭೆಯನ್ನು ಸ್ಥಾಪಿಸಿದರು.

**9. ಕನ್ನಾಂಬಾಡಿ ಅಣೆಕಟ್ಟನ್ನು ಯಾವ ನದಿಗೆ ಅಡ್ಡಲಾಗಿ ಕಟ್ಟಲಾಗಿದೆ?**
**ಉತ್ತರ:** ಕನ್ನಾಂಬಾಡಿ ಅಣೆಕಟ್ಟನ್ನು ಕಾವೇರಿ ನದಿಗೆ ಅಡ್ಡಲಾಗಿ ಕಟ್ಟಲಾಗಿದೆ.

**10. "ಕೈಗಾರಿಕೀಕರಣ ಇಲ್ಲವೆ ಅವನತಿ" ಎಂಬ ಘೋಷಣೆ ಮಾಡಿದರು ಯಾರು?**
**ಉತ್ತರ:**"ಕೈಗಾರಿಕೀಕರಣ ಇಲ್ಲವೆ ಅವನತಿ" ಎಂಬ ಘೋಷಣೆ ಮಾಡಿದರು ಸರ್.ಎಂ. ವಿಶ್ವೇಶ್ವರಯ್ಯನವರು.

**11. ಸರ್.ಎಂ. ವಿಶ್ವೇಶ್ವರಯ್ಯನವರ ಸಾಧನೆಯನ್ನು ಗುರುತಿಸಿ ಭಾರತ ಸರ್ಕಾರ ಯಾವ ಪ್ರಶಸ್ತಿಯನ್ನು ನೀಡಿತು?**
**ಉತ್ತರ:** ಸರ್.ಎಂ. ವಿಶ್ವೇಶ್ವರಯ್ಯನವರ ಸಾಧನೆಯನ್ನು ಗುರುತಿಸಿ ಭಾರತ ಸರ್ಕಾರ ದೇಶದ ಅತ್ಯುನ್ನತ 'ಭಾರತ ರತ್ನ' ಪ್ರಶಸ್ತಿಯನ್ನು ನೀಡಿತು.

**12. ಜಲಾಶಯಗಳಿಗೆ ಸ್ವಯಂಚಾಲಿತ ಬಾಗಿಲುಗಳ ಅನ್ವೇಷ್ವಣೆ ಮಾಡಿದವರು ಯಾರು?**
**ಉತ್ತರ:** ಜಲಾಶಯಗಳಿಗೆ ಸ್ವಯಂಚಾಲಿತ ಬಾಗಿಲುಗಳ ಅನ್ವೇಷ್ವಣೆ ಮಾಡಿದವರು ಸರ್.ಎಂ. ವಿಶ್ವೇಶ್ವರಯ್ಯನವರು.

**13. ವಿಶ್ವೇಶ್ವರಯ್ಯನವರ ಪೂರ್ವಜರು ಎಲ್ಲಿಯವರು?**
**ಉತ್ತರ:** ವಿಶ್ವೇಶ್ವರಯ್ಯನವರ ಪೂರ್ವಜರು ಮೂಲತಃ ಕರ್ನೂಲು ಜಿಲ್ಲೆ ಗಿಡ್ಡಲೂರು ತಾಲೂಕಿನ 'ಮೋಕ್ಷಗೊಂಡಂ' ಅಗ್ರಹಾರಕ್ಕೆ ಸೇರಿದವರು.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**1. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು?**
**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು ಕಾಲದಲ್ಲಿ (1) ಗ್ರಾಮ ನಿರ್ಮಲೀಕರಣ (2) ವೈದ್ಯ ಸಹಾಯ (3) ವಿದ್ಯಾ ಪ್ರಚಾರ (4) ನೀರಿನ ಸೌಕರ್ಯ (5) ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು.

**2. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ಯಾವ ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು?**
**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ 1900ರಲ್ಲಿ ಶಿವನಸಮುದ್ರದ ಬಳಿ ಕಾವೇರಿ ನದಿ ನೀರಿನಿಂದ ಪ್ರಾರಂಭಿಸಿದ ಶಿವನಸಮುದ್ರ ಜಲವಿದ್ಯುತ್ ಯೋಜನೆ, 1907ರಲ್ಲಿ ವಾಣಿ ವಿಲಾಸ ಸಾಗರ ಆಣೆಕಟ್ಟು (ಮಾರಿ ಕಣಿವೆ) ಮತ್ತು 1911ರಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಕನ್ನಾಂಬಾಡಿಯಲ್ಲಿ ಕೃಷ್ಣರಾಜ ಸಾಗರ ಆಣೆಕಟ್ಟು ನಿರ್ಮಾಣ ಮುಂತಾದ ವಿದ್ಯುತ್ ಮತ್ತು ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು.

**3. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು ಏನೆಂದು ಹೇಳಿದ್ದಾರೆ?**
**ಉತ್ತರ:** ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು "ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರ, ಶಿಕ್ಷಣವು ಸಂಜೀವಿನಿ, ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು" ಎಂದು ಹೇಳಿದ್ದಾರೆ.

**4. ನೆಹರೂ ಅವರು ಸರ್ ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ ಏನೆಂದು ಹೇಳಿದ್ದಾರೆ?**
**ಉತ್ತರ:** ನೆಹರೂ ಅವರು ಸರ್.ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ "ದುರದೃಷ್ಟವಶಾತ್ ಭಾರತೀಯರಾದ ನಾವು ಹೆಚ್ಚು ಮಾತನಾಡುವವರು ಮತ್ತು ನುಡಿದಂತೆ ನಡೆಯಲಾರದವರೆಂಬ ದೂಷಣೆಗೆ ಒಳಗಾಗಿದ್ದೇವೆ. ತಾವು ಈ ಮಾತಿಗೆ ಬಹುದೊಡ್ಡ ರೀತಿಯಲ್ಲಿ ಹೊರತಾಗಿದ್ದೀರಿ. ತಾವು ಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ. ಅದನ್ನು ನಾವು ತಮ್ಮಿಂದ ಕಲಿಯೋಣ". ಎಂದು ಹೇಳಿದ್ದಾರೆ.

**5. ಹಣಕಾಸು ನೀತಿಯಲ್ಲಿ ವಿಶ್ವೇಶ್ವರಯ್ಯ ಅವರು ಮಾಡಿದ ಮಾರ್ಪಾಡುಗಳಾವುವು?**
**ಉತ್ತರ:** ವಿಶ್ವೇಶ್ವರಯ್ಯನವರು ಹಣಕಾಸು ನೀತಿಯಲ್ಲಿ ಮಾರ್ಪಾಡು ಮಾಡಲು 1913 ರಲ್ಲಿ ಮೈಸೂರು ಬ್ಯಾಂಕನ್ನು ಸ್ಥಾಪಿಸಿದರು. ಕೈಗಾರಿಕೆಗಳ ಅಭಿವೃದ್ಧಿಗೆ ಫೀಡರ್ ಬ್ಯಾಂಕ್ ಹಾಗೂ ಕೈಗಾರಿಕಾ ಹೂಡಿಕೆ ಮತ್ತು ಅಭಿವೃದ್ಧಿ ನಿಧಿಗಳನ್ನು ಸ್ಥಾಪಿಸಿದರು. ಸಾರ್ವಜನಿಕ ಜೀವವಿಮಾ ಯೋಜನೆ

ಜಾರಿಗೆ ತಂದರು. ರೈತರಿಗೆ ಹಾಗೂ ಕರಕುಶಲ ಕೆಲಸಗಾರರಿಗೆ ಸಾಲದ ಸೌಲಭ್ಯ ನೀಡಲು ಸಹಕಾರಿ ಕ್ಷೇತ್ರವನ್ನು ಬಲವರ್ಧನೆಗೊಳಿಸಿದರು. ಪ್ರಾಂತೀಯ ಸಹಕಾರಿ ಬ್ಯಾಂಕ್‌ಗಳನ್ನು ಸ್ಥಾಪಿಸಿದರು. ರಾಜ್ಯದ ಆಸ್ತಿಯನ್ನು ಹೆಚ್ಚಿಸಿ, ಆದಾಯ ತರುವುದರ ಮೂಲಕ ಅಭಿವೃದ್ಧಿ ಕಾರ್ಯಗಳ ಪ್ರಭಾವವನ್ನು ಅಳೆಯಲು ಅನುಕೂಲವಾಗುವಂತೆ ಆಯವ್ಯಯದಲ್ಲಿ ಹೊಸ ದೃಷ್ಟಿಕೋನವನ್ನು ಕಂಡುಕೊಂಡರು.

## ಹೆಚ್ಚುವರಿ ಪ್ರಶ್ನೋತ್ತರಗಳು

**6. ವಿಶ್ವೇಶ್ವರಯ್ಯನವರು ಸಾಹಿತ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆ ಏನು?**

**ಉತ್ತರ:** ವಿಶ್ವೇಶ್ವರಯ್ಯನವರು 'ರಿಕನ್‌ಸ್ಟ್ರಕ್ಟಿಂಗ್ ಇಂಡಿಯಾ', 'ಪ್ಲಾನ್ಡ್ ಎಕಾನಮಿ ಫಾರ್ ಇಂಡಿಯ' ಹಾಗೂ 'ಮೆಮೋರೀಸ್ (Memoir) ಆಫ್ ಮೈ ವರ್ಕಿಂಗ್ ಲೈಫ್ (ಆತ್ಮಚರಿತ್ರೆ)', 'ನೇಷನ್ ಬಿಲ್ಡಿಂಗ್ ಪ್ಲಾನ್ ಫಾರ್ ಇಂಡಿಯಾ' ಕೃತಿಗಳನ್ನು ಬರೆದು ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿದ್ದಾರೆ.

**7. ವಿಶ್ವೇಶ್ವರ್ಯನವರು ಈಸಿ ಮತ್ತು ಮೂಸಿ ನದಿಗಳ ಸಮಸ್ಯೆಯನ್ನು ಹೇಗೆ ಬಗೆಹರಿಸಿದರು? ಅಥವಾ ವಿಶ್ವೇಶ್ವರಯ್ಯನವರು ಹೈದರ್‌ಬಾದ್ ನಗರಕ್ಕೆ ಸಲ್ಲಿಸಿದ ಸೇವೆ ಏನು?**

**ಉತ್ತರ:** ಹೈದರಾಬಾದ್ ನಗರಕ್ಕೆ ಈಸಿ ಮತ್ತು ಮೂಸಿ ನದಿಗಳ ಪ್ರವಾಹದಿಂದ ಅಪಾರ ನಷ್ಟ ಸಂಭವಿಸುತ್ತಿತ್ತು. ಅದನ್ನು ತಡೆಯಲು ಎರಡು ನದಿಗಳಿಗೂ ಪ್ರತ್ಯೇಕ ಜಲಾಶಯ ನಿರ್ಮಿಸುವುದರ ಮೂಲಕ ಸಮಸ್ಯೆಯನ್ನು ಬಗೆಹರಿಸಿದರು. ಹೈದರಾಬಾದ್ ನಗರವನ್ನು ಭಾರತದ ಸುಯೋಜಿತ ನಗರಗಳ ಸಾಲಿಗೆ ಸೇರ್ಪಡೆಯಾಗುವಂತೆ ಮಾಡಿದರು.

**8. ವಿಶ್ವೇಶ್ವರಯ್ಯನವರು ಮುಂಬೈ ಪ್ರಾಂತ್ಯದಲ್ಲಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.**

**ಉತ್ತರ:** ವಿಶ್ವೇಶ್ವರಯ್ಯನವರು 1884 ರಲ್ಲಿ ಮುಂಬೈ ಪ್ರಾಂತ್ಯದ ಲೋಕೋಪಯೋಗಿ ಇಲಾಖೆಯಲ್ಲಿ ಸಹಾಯಕ ಎಂಜಿನಿಯರ್ ಆಗಿ ಸೇವೆ ಪ್ರಾರಂಭಿಸಿದರು. ಖಾನ್‌ದೇಶ ಮತ್ತು ನಾಸಿಕ್ ಜಿಲ್ಲೆಗಳಲ್ಲಿ ಹರಿಯುತ್ತಿದ್ದ ಪಂಜ್ರಾ ನದಿಯ ನೀರಾವರಿ ಕಾಲುವೆಗೆ ತೂಬು ಮೇಲ್ಗಾಲುವೆಯನ್ನು ನಿರ್ಮಿಸುವ ಕಾರ್ಯದಲ್ಲಿ ಯಶಸ್ಸು ಗಳಿಸಿದರು. ಸಿಂಧ್ ಪ್ರಾಂತ್ಯದ ಸುಕ್ಕೂರು ಪಟ್ಟಣಕ್ಕೆ ಕುಡಿಯುವ ನೀರಿನ ಪೂರೈಕೆಯ ಕಾರ್ಯವನ್ನು ಯಶಸ್ವಿಯಾಗಿ ಪೂರೈಸಿದರು. ಪೂನಾದ ಮುಥಾ ಕಾಲುವೆಗೆ ನೀರಿನ ನೆಲೆಯಾಗಿದ್ದ ಪೀಪ್ ಜಲಾಶಯಕ್ಕೆ ಸ್ವಯಂಚಾಲಿತ ಬಾಗಿಲುಗಳನ್ನು ಅಳವಡಿಸಿದರು. ಮುಂದೆ ನಾಲ್ಕು ವರ್ಷಗಳ ಕಾಲ ಮುಂಬೈ ಪ್ರಾಂತ್ಯದ ಸ್ಯಾನಿಟರಿ ಎಂಜಿನಿಯರ್ ಆಗಿ ನೇಮಕಗೊಂಡರು. ಈ ಹುದ್ದೆಗೆ ನೇಮಕವಾದ ಪ್ರಥಮ ಭಾರತೀಯರು ಎಂಬುದು ಗಮನಾರ್ಹ ಅಂಶವಾಗಿದೆ.

**9. ನಾಲ್ವಡಿ ಕೃಷ್ಣರಾಜ ಒಡೆಯರು ಸ್ಥಾಪಿಸಿದ ನ್ಯಾಯ ವಿಧಾಯಕ ಸಭೆಯ ಕಾರ್ಯಗಳೇನಾಗಿದ್ದವು ?**

**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು 1907 ರಲ್ಲಿ ನ್ಯಾಯ ವಿಧಾಯಕ ಸಭೆಯನ್ನೂ ಸ್ಥಾಪಿಸಿದರು. ಇದು ಮೇಲ್ಮನೆಯ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು , ಜೂನ್ ಮತ್ತು ಡಿಸೆಂಬರ್ ತಿಂಗಳುಗಳಲ್ಲಿ ಬೆಂಗಳೂರಿನಲ್ಲಿ ಸಮಾವೇಶಗೊಳ್ಳುತ್ತಿತ್ತು. ಪ್ರಜಾಪ್ರತಿನಿಧಿ ಸಭೆಯಲ್ಲಿ ಮಂಡಿಸಿದ ಎಲ್ಲ ವಿಷಯಗಳನ್ನೂ ಸಹ ವಿಮರ್ಶಿಸುವ ಅಧಿಕಾರ ಆ ಸಭೆಗೆ ಇದ್ದಿತು. ಮುಖ್ಯವಾಗಿ ಯಾವುದೇ ಕಾನೂನನ್ನು ಜಾರಿಗೊಳಿಸಲು ಆ ಸಭೆಯ ಅನುಮತಿ ಅಗತ್ಯವಾಗಿತ್ತು. ಆ ಸಭೆಗೆ ಸರ್ಕಾರದ ಖರ್ಚುಗಳನ್ನು ಕಡಿಮೆ ಮಾಡುವ ಅಧಿಕಾರ ಸಹ ಇದ್ದಿತು.

**10. ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದಲ್ಲಿದ್ದ ಪ್ರಜಾಪ್ರತಿನಿಧಿ ಸಭೆಯನ್ನು ಕುರಿತು ಬರೆಯಿರಿ.**

**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು 1923ರಲ್ಲಿ ಹೊಸ ಕಾನೂನೊಂದನ್ನು ಜಾರಿಗೆ ತಂದು ಪ್ರಜಾಪ್ರತಿನಿಧಿ ಸಭೆಯನ್ನು ಶಾಸನಬದ್ಧ ಸಂಸ್ಥೆಯನ್ನಾಗಿ ಮಾರ್ಪಡಿಸಿದರು. ಪ್ರಜಾಪ್ರತಿನಿಧಿ ಸಭೆಯು ವರ್ಷಕ್ಕೆ ಎರಡು ಬಾರಿ (1.ಜೂನ್– ಮಹಾರಾಜರ ವರ್ಧಂತಿ, 2.ಅಕ್ಟೋಬರ್ – ದಸರಾ ಮಹೋತ್ಸವ) ಸಮಾವೇಶಗೊಂಡು ಕಲಾಪಗಳನ್ನು ನಡೆಸುತ್ತಿತ್ತು. ಅಲ್ಲಿ ವಾರ್ಷಿಕ ಆಯವ್ಯಯ ಪರಿಶೀಲನೆ, ಪ್ರಶ್ನೋತ್ತರಗಳು, ಠರಾವುಗಳನ್ನು ಮಂಡಿಸುವುದು ಮುಂತಾದ ಸಂಸದೀಯ ಮಾದರಿಯ ನಡವಳಿಕೆಗಳು ನಡೆಯುತ್ತಿದ್ದವು.

**ಇ) ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**1. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು? ವಿವರಿಸಿ**

**ಉತ್ತರ:** ನಾಲ್ವಡಿ ಕೃಷ್ಣರಾಜ ಒಡೆಯರು 1902 ರಲ್ಲಿ ಮೈಸೂರು ರಾಜ್ಯದ ನೇರ ಉಸ್ತುವಾರಿ ವಹಿಸಿಕೊಂಡರು. ಆಗ ದಿವಾನರಾಗಿದ್ದ ಸರ್. ಕೆ. ಶೇಷಾದ್ರಿ ಅಯ್ಯರ್‌ರವರ ಸಹಕಾರದೊಡನೆ ಮೈಸೂರು ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಕಂಕಣಬದ್ಧರಾದರು. 1923ರಲ್ಲಿ ಹೊಸ ಕಾನೂನೊಂದನ್ನು ಜಾರಿಗೆ ತಂದು ಪ್ರಜಾಪ್ರತಿನಿಧಿ ಸಭೆಯನ್ನು ಶಾಸನಬದ್ಧ ಸಂಸ್ಥೆಯನ್ನಾಗಿ ಮಾರ್ಪಡಿಸಿದರು.

1907 ರಲ್ಲಿ ನ್ಯಾಯ ವಿಧಾಯಕ ಸಭೆಯನ್ನೂ ಸಹ ಸ್ಥಾಪಿಸಿದರು. ಪ್ರಜಾಪ್ರತಿನಿಧಿ ಸಭೆಯಲ್ಲಿ ಮಂಡಿಸಿದ ಎಲ್ಲ ವಿಷಯಗಳನ್ನೂ ಸಹ ವಿಮರ್ಶಿಸುವ ಅಧಿಕಾರ ಆ ಸಭೆಗೆ ಇದ್ದಿತು. 1. ಗ್ರಾಮ ನಿರ್ಮಲೀಕರಣ 2. ವೈದ್ಯ ಸಹಾಯ 3. ವಿದ್ಯಾ ಪ್ರಚಾರ 4. ನೀರಿನ ಸೌಕರ್ಯ 5. ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು. ಸಾಹಿತ್ಯ, ಸಂಗೀತ, ವಾಸ್ತುಶಿಲ್ಪಗಳ ಅಭಿವೃದ್ಧಿಗೆ ಒತ್ತು ನೀಡಿದರು. ನಾಡಿನಲ್ಲೇ ಮೊಟ್ಟಮೊದಲ ವಿಶ್ವವಿದ್ಯಾನಿಲಯವಾದ ಮೈಸೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿದರು. ಬೆಂಗಳೂರಿನಲ್ಲಿ ಕನ್ನಡ ಸಾಹಿತ್ಯ ಪರಿಷತ್, ಮೈಸೂರು ಬ್ಯಾಂಕಿನ ಸ್ಥಾಪನೆ ಮಾಡಲಾಯಿತು. ಉಚಿತ ಆಸ್ಪತ್ರೆಗಳು ಕಾರ್ಯಾರಂಭ ಮಾಡಿದವು. 1906ರಲ್ಲಿ ಸಹಕಾರ ಸಂಘಗಳನ್ನು ಸ್ಥಾಪಿಸಲಾಯಿತು. ರೈಲು ಯೋಜನೆಗಳನ್ನು ಜಾರಿಗೆ ತಂದರು. ಅಲ್ಲದೆ ಒಡೆಯರ ಕಾಲದಲ್ಲಿ ಶಿವನಸಮುದ್ರ ಜಲವಿದ್ಯುತ್ ಯೋಜನೆ, ವಾಣಿ ವಿಲಾಸ ಸಾಗರ ಆಣೆಕಟ್ಟು ಮತ್ತು ಕನ್ನಾಂಬಾಡಿಯಲ್ಲಿ ಕೃಷ್ಣರಾಜ ಸಾಗರ ಆಣೆಕಟ್ಟು ನಿರ್ಮಾಣ ಮಾಡಿದ್ದರಿಂದ ವಿದ್ಯುತ್ ಮತ್ತು ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು. ಪ್ರಾಥಮಿಕ ಮತ್ತು ಮಾಧ್ಯಮಿಕ ವಿದ್ಯಾಭ್ಯಾಸವನ್ನು ಉಚಿತ ಮತ್ತು ಕಡ್ಡಾಯವಾಗಿ ಪ್ರಾರಂಭಿಸಲಾಯಿತು. ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವನ್ನಾಗಿ ರೂಪಿಸಿದರು. ಇವರ ಕಾಲದಲ್ಲಿ ಇಡೀ ಭರತ ಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು ಕಂಡುದರಿಂದ, ಮೈಸೂರು ಸಂಸ್ಥಾನವು **'ಮಾದರಿ ಮೈಸೂರು ರಾಜ್ಯ'** ಎಂಬ ಕೀರ್ತಿಗೆ ಪ್ರಾಪ್ತವಾಯಿತು.

**2. ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.**

**ಉತ್ತರ:** ಮೈಸೂರು ಸಂಸ್ಥಾನದ ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರು ವಿಶ್ವೇಶ್ವರಯ್ಯ ಅವರನ್ನು ದಿವಾನರನ್ನಾಗಿ ನೇಮಿಸಿದರು. ದಿವಾನರಾದ ನಂತರ ಆಡಳಿತದಲ್ಲಿ ಹೊಸ ಮಾದರಿಯನ್ನು ಅನುಷ್ಠಾನಗೊಳಿಸಿ ಕಚೇರಿಯ ಕೆಲಸ ಕಾರ್ಯಗಳಲ್ಲಿ ಸುಧಾರಣೆ ತಂದರು. ದಕ್ಷತೆ ಮತ್ತು ಪ್ರಾಮಾಣಿಕತೆಗೆ ಒತ್ತು ನೀಡಿದರು. ನ್ಯಾಯಾಂಗ ಮತ್ತು ಕಾರ್ಯಾಂಗಗಳ ಅಧಿಕಾರವನ್ನು ಪ್ರತ್ಯೇಕಗೊಳಿಸಿದರು. ಶಿಕ್ಷಣದ ವಿವಿಧ ಯೋಜನೆಗಳನ್ನು ರೂಪಿಸಿದರು. 1913ರಲ್ಲಿ ಪ್ರಾಥಮಿಕ ಶಿಕ್ಷಣ ನಿಬಂಧನೆಯನ್ನು ಜಾರಿಗೆ ತಂದರು. ಮೈಸೂರು ಸಂಸ್ಥಾನವೇ ಪ್ರತ್ಯೇಕವಾದ ಪ್ರೌಢಶಿಕ್ಷಣದ ಅಂತಿಮ ಪರೀಕ್ಷೆ ನಡೆಸುವ ಯೋಜನೆಯನ್ನು ಆರ್ಥಿಕ ಪರಿಷತ್ತಿನ ಮೂಲಕ ರೂಪುಗೊಳಿಸಿದರು. ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪನೆ ಇವರ ಕಾಲದಲ್ಲಾಯಿತು. ಬೆಂಗಳೂರಿನಲ್ಲಿ ಮೆಕಾನಿಕಲ್ ಎಂಜಿನಿಯರಿಂಗ್ ಕಾಲೇಜು, ಮೈಸೂರಿನಲ್ಲಿ ಚಾಮರಾಜೇಂದ್ರ ತಾಂತ್ರಿಕ ಸಂಸ್ಥೆಗಳನ್ನು ಪ್ರಾರಂಭಿಸಿದರು.

'ಕನ್ನಡ ಸಾಹಿತ್ಯ ಪರಿಷತ್ತನ್ನು' ಸ್ಥಾಪಿಸಿದ್ದು ಇವರ ಕಾಲದ ಮತ್ತೊಂದು ಮಹತ್ವದ ಸಾಧನೆಯಾಗಿದೆ. ವಿಶ್ವೇಶ್ವರಯ್ಯ ಅವರು ಕೈಗಾರಿಕೆಗೆ ಅಗ್ರ ಪ್ರಾಶಸ್ತ್ಯ ನೀಡಿದ್ದರು. **"ಕೈಗಾರಿಕೀಕರಣ ಇಲ್ಲವೆ ಅವನತಿ"** ಎಂಬ ಘೋಷಣೆ ಮಾಡಿದರು. ಇವರ ಕಾಲದಲ್ಲಿ ಭದ್ರಾವತಿಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಯನ್ನು ಸ್ಥಾಪಿತವಾಯಿತು. ಇದಲ್ಲದೆ ಹೆಂಚಿನ ಕಾರ್ಖಾನೆ, ಮೊಳೆ ಮತ್ತು ಗೊಬ್ಬರ ತಯಾರಿಕಾ ಸ್ಥಾವರ, ಸಕ್ಕರೆ ಕಾರ್ಖಾನೆ, ಔಷಧ ತಯಾರಿಕಾ ಘಟಕ, ಗಂಧದ ಎಣ್ಣೆ, ಬೆಂಕಿಕಡ್ಡಿ ಹಾಗೂ ಕಾಗದದ ಕಾರ್ಖಾನೆಗಳು ಸ್ಥಾಪಿತವಾದವು. ಸೋಪು ಹಾಗೂ ಲೋಹ ತಯಾರಿಕೆ, ಕಲೆ ಮತ್ತು ಕರಕುಶಲ ಡಿಪೋ, ಕೃಷ್ಣರಾಜೇಂದ್ರ ಬಟ್ಟೆ ಗಿರಣಿ, ಕಾಗದದ ತಿರುಳು, ರಟ್ಟು, ಪೆನ್ಸಿಲ್, ಬೆಂಕಿಕಡ್ಡಿ ಮತ್ತು ಪೀಠೋಪಕರಣಗಳ ತಯಾರಿಕಾ ಘಟಕಗಳು – ಹೀಗೆ ನೂರಾರು ಕೈಗಾರಿಕೆಗಳು ಪ್ರಾರಂಭಗೊಂಡವು.

1913ರಲ್ಲಿ ಮೈಸೂರು ಬ್ಯಾಂಕನ್ನು ಸ್ಥಾಪಿಸಿದರು. ಕೈಗಾರಿಕೆಗಳ ಅಭಿವೃದ್ಧಿಗೆ ಫೀಡರ್ ಬ್ಯಾಂಕ್ ಹಾಗೂ ಕೈಗಾರಿಕಾ ಹೂಡಿಕೆ ಮತ್ತು ಅಭಿವೃದ್ಧಿ ನಿಧಿಗಳನ್ನು ಸ್ಥಾಪಿಸಿದರು. ಸಾರ್ವಜನಿಕ ಜೀವವಿಮಾ ಯೋಜನೆ ಜಾರಿಗೆ ತಂದರು. ಪ್ರಾಂತೀಯ ಸಹಕಾರಿ ಬ್ಯಾಂಕ್‌ಗಳನ್ನು ಸ್ಥಾಪಿಸಿದರು. ರಾಜ್ಯದ ಆಸ್ತಿಯನ್ನು ಹೆಚ್ಚಿಸಿ, ಆದಾಯ ತರುವುದರ ಮೂಲಕ ಅಭಿವೃದ್ಧಿ ಕಾರ್ಯಗಳ ಪ್ರಭಾವವನ್ನು ಅಳೆಯಲು ಅನುಕೂಲವಾಗುವಂತೆ ಆಯವ್ಯಯದಲ್ಲಿ ಹೊಸ ದೃಷ್ಟಿಕೋನವನ್ನು ಕಂಡುಕೊಂಡರು.

**3. ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ.**

**ಉತ್ತರ:** ವಿಶ್ವೇಶ್ವರಯ್ಯ ಅವರು ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರ, ಶಿಕ್ಷಣವು ಸಂಜೀವಿನಿ ಎಂಬುದನ್ನು ಅರಿತು **"ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು"** ಎಂದು ಹೇಳಿದ್ದಾರೆ. ಅದಕ್ಕಾಗಿ ಅವರು ಶಿಕ್ಷಣದ ವಿವಿಧ ಯೋಜನೆಗಳನ್ನು ರೂಪಿಸಿದರು. 1913 ರಲ್ಲಿ ಪ್ರಾಥಮಿಕ ಶಿಕ್ಷಣ ನಿಬಂಧನೆಯನ್ನು ಜಾರಿಗೆ ತಂದರು. ಪ್ರೌಢಶಿಕ್ಷಣ ಶಾಲೆಗಳು ಮದ್ರಾಸ್ ವಿಶ್ವವಿದ್ಯಾನಿಲಯದ ನಿಯಂತ್ರಣಕ್ಕೆ ಒಳಪಟ್ಟಿದ್ದವು. ಇದನ್ನು ಬದಲಿಸಿ ಮೈಸೂರು ಸಂಸ್ಥಾನವೇ ಪ್ರತ್ಯೇಕವಾದ ಪ್ರೌಢಶಿಕ್ಷಣದ ಅಂತಿಮ ಪರೀಕ್ಷೆ ನಡೆಸುವ ಯೋಜನೆಯನ್ನು ಆರ್ಥಿಕ ಪರಿಷತ್ತಿನ ಮೂಲಕ ರೂಪುಗೊಳಿಸಿದರು. ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪನೆ ಇವರ ಕಾಲದಲ್ಲಾಯಿತು. ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿದರು. ಇದಕ್ಕಾಗಿಯೇ ಬೆಂಗಳೂರಿನಲ್ಲಿ ಮೆಕಾನಿಕಲ್ ಎಂಜಿನಿಯರಿಂಗ್ ಕಾಲೇಜು, ಮೈಸೂರಿನಲ್ಲಿ ಚಾಮರಾಜೇಂದ್ರ ತಾಂತ್ರಿಕ ಸಂಸ್ಥೆಗಳನ್ನು ಪ್ರಾರಂಭಿಸಿದರು. ಕನ್ನಡ ಭಾಷೆ ಮತ್ತು ಸಾಹಿತ್ಯಗಳ ಬಗ್ಗೆ ಸಾರ್ವಜನಿಕರಲ್ಲಿ ಉಂಟಾಗಿದ್ದ ಆಸಕ್ತಿಯನ್ನು ಮನಗಂಡು 'ಕನ್ನಡ ಸಾಹಿತ್ಯ ಪರಿಷತ್ತನ್ನು' ಸ್ಥಾಪಿಸಿದ್ದು ಇವರ ಕಾಲದ ಮತ್ತೊಂದು ಮಹತ್ವದ ಸಾಧನೆಯಾಗಿದೆ.

**ಈ) ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**1. "ಸಾಮಾಜಿಕ ಕಾನೂನುಗಳ ಹರಿಕಾರ."**

**ಆಯ್ಕೆ:–** ಈ ವಾಕ್ಯವನ್ನು **'ಭಾಗ್ಯಶಿಲ್ಪಿಗಳು'** ಪಾಠದಲ್ಲಿನ **'ಪಠ್ಯಪುಸ್ತಕ ರಚನಾ ಸಮಿತಿ'** ಯವರು ಆಯ್ಕೆ ಮಾಡಿ ಕೊಟ್ಟಿರುವ **'ನಾಲ್ವಡಿ ಕೃಷ್ಣರಾಜ ಒಡೆಯರ್'** ಎಂಬ ಪಾಠಭಾಗದಿಂದ ಆರಿಸಲಾಗಿದೆ.

**ಸಂದರ್ಭ:–** ನಾಲ್ವಡಿ ಕೃಷ್ಣರಾಜ ಒಡೆಯರು ಸಮಾಜದ ಅಭಿವೃದ್ಧಿಗಾಗಿ ಮತ್ತು ಸಾಮಾಜಿಕ ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಲು ಸಹಕಾರಿ ಕಾರ್ಮಿಕ ಪರಿಹಾರ ಕಾಯ್ದೆ, ಮೈಸೂರು ಗ್ರಾಮ ನ್ಯಾಯಾಲಯ ಕಾಯ್ದೆ, ಗ್ರಾಮ ಪಂಚಾಯಿತಿಗಳ ಕಾಯ್ದೆ, ವೇಶ್ಯಾವೃತ್ತಿ ತಡೆಗಟ್ಟುವ ಕಾಯ್ದೆ; ವಿಧವಾ ಮರುವಿವಾಹ ಕಾಯ್ದೆ ಮುಂತಾದ ಕಾನೂನುಗಳನ್ನು ಜಾರಿಗೆ ತಂದು ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವನ್ನಾಗಿ ರೂಪಿಸಿದ್ದರಿಂದ **'ಸಾಮಾಜಿಕ ಕಾನೂನುಗಳ ಹರಿಕಾರ'** ಎಂದು ಹೆಸರಾದರು.

**ಸ್ವಾರಸ್ಯ:–** ಸ್ವಾಸ್ಥ ಸಮಾಜಕ್ಕಾಗಿ ಮತ್ತು ಸಮಾಜದ ಸರ್ವತೋಮುಖ ಅಭಿವೃದ್ಧಿಗಾಗಿ ನಾಲ್ವಡಿ ಕೃಷ್ಣರಾಜ ಒಡೆಯರು ತಂದ ಕಾನೂನುಗಳು ಅವರನ್ನು "ಸಾಮಾಜಿಕ ಕಾನೂನುಗಳ ಹರಿಕಾರ" ರನ್ನಾಗಿಸಿದ್ದು ಹೆಮ್ಮೆಯ ವಿಷಯವಾಗಿದೆ.

**2. "ಅವರ ಸಾಧನೆಯ ಕಿರೀಟಕ್ಕೆ ಮತ್ತೊಂದು ಗರಿಯನ್ನು ಸೇರಿಸಿತು."**

**ಆಯ್ಕೆ:–** ಈ ವಾಕ್ಯವನ್ನು **'ಭಾಗ್ಯಶಿಲ್ಪಿಗಳು'** ಪಾಠದ ಭಾಗವಾಗಿ **'ಡಿ.ಎಸ್. ಜಯಪ್ಪಗೌಡ'** ಅವರು ರಚಿಸಿರುವ **'ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು'** ಎಂಬ ಕೃತಿಯಿಂದ ಆಯ್ದು ಕೊಟ್ಟಿರುವ **'ಸರ್.ಎಂ.ವಿಶ್ವೇಶ್ವರಯ್ಯ'** ಎಂಬ ಪಾಠಭಾಗದಿಂದ ಆರಿಸಲಾಗಿದೆ.

**ಸಂದರ್ಭ:–** ವಿಶ್ವೇಶ್ವರಯ್ಯನವರು ಮುಂಬೈ ಪ್ರಾಂತ್ಯದಲ್ಲಿ ಸಹಾಯಕ ಇಂಜಿನಿಯರಾಗಿ ಅನೇಕ ಸಾಧನೆಗಳನ್ನು ಮಾಡಿದ್ದರು. ಹಾಗೆಯೇ ಪೂನಾದ ಮುಥಾ ಕಾಲುವೆಗೆ ನೀರಿನ ನೆಲೆಯಾಗಿದ್ದ ಫೀಫ್ ಜಲಾಶಯಕ್ಕೆ ಸ್ವಯಂಚಾಲಿತ ಬಾಗಿಲುಗಳನ್ನು ಅಳವಡಿಸಿದರು. ಸ್ವಯಂಚಾಲಿತ ಬಾಗಿಲುಗಳ

ಅನ್ವೇಷಣೆ ವಿಶ್ವೇಶ್ವರಯ್ಯ ಅವರ **ಸಾಧನೆಯ ಕಿರೀಟಕ್ಕೆ ಮತ್ತೊಂದು ಗರಿಯನ್ನು ಸೇರಿಸಿತು** ಎಂದು ಅವರ ಸಾಧನೆಯನ್ನು ಹೊಗಳಿದ ಸಂದರ್ಭವಾಗಿದೆ.

**ಸ್ವಾರಸ್ಯ:–** ವಿಶ್ವೇಶ್ವರಯ್ಯನವರ ಅನ್ವೇಷಣೆಗಳು ಸಾಧನೆಗಳ ಸರಮಾಲೆಯಾಗಿ ರೂಪುಗೊಂಡಿರುವುದು ಅವರ ಬೌದ್ಧಿಕ ಯಶಸ್ಸಿನ ಕಿರೀಟದ ಗರಿಗಳಾಗಿವೆ ಎಂಬುದು ಸ್ವಾರಸ್ಯಪೂರ್ಣವಾಗಿದೆ.

**3. "ಮೈಸೂರು ಸಂಸ್ಥಾನಕ್ಕೆ 'ಮಾದರಿ ಮೈಸೂರು' ಎಂಬ ಕೀರ್ತಿ ಪ್ರಾಪ್ತವಾಯಿತು."**

**ಆಯ್ಕೆ :–** ಈ ವಾಕ್ಯವನ್ನು **'ಭಾಗ್ಯಶಿಲ್ಪಿಗಳು'** ಪಾಠದಲ್ಲಿನ **'ಪಠ್ಯಪುಸ್ತಕ ರಚನಾ ಸಮಿತಿ'** ಯವರು ಆಯ್ಕೆ ಮಾಡಿ ಕೊಟ್ಟಿರುವ **'ನಾಲ್ವಡಿ ಕೃಷ್ಣರಾಜ ಒಡೆಯರ್'** ಎಂಬ ಪಾಠಭಾಗದಿಂದ ಆರಿಸಲಾಗಿದೆ.

**ಸಂದರ್ಭ:–** ನಾಲ್ವಡಿ ಕೃಷ್ಣರಾಜ ಒಡೆಯರು ಮೈಸೂರು ರಾಜ್ಯದ ನೇರ ಉಸ್ತುವಾರಿಯನ್ನು ವಹಿಸಿಕೊಂಡ ನಂತರ ಮೈಸೂರು ರಾಜ್ಯದ ಸರ್ವೋತೋಮುಖ ಅಭಿವೃದ್ಧಿಗೆ ಕಂಕಣಬದ್ಧರಾಗಿ ದುಡಿದರು. ಇಡೀ ಭರತ ಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು ಕಂಡಿತು ಆದ್ದರಿಂದ **"ಮೈಸೂರು ಸಂಸ್ಥಾನಕ್ಕೆ 'ಮಾದರಿ ಮೈಸೂರು' ಎಂಬ ಕೀರ್ತಿ ಪ್ರಾಪ್ತವಾಯಿತು"** ಎಂದು ಹೇಳಿದ ಸಂದರ್ಭವಾಗಿದೆ.

**ಸ್ವಾರಸ್ಯ:–** ಮೈಸೂರು ಸಂಸ್ಥಾನವು ಇಡಿ ಭರತ ಖಂಡಕ್ಕೆ ಮಾದರಿ ಸಂಸ್ಥಾನವಾಗಿ ಕೀರ್ತಿಯನ್ನು ಪಡೆಯಿತು ಎನ್ನುವುದರ ಹಿಂದೆ ನಾಲ್ವಡಿ ಕೃಷ್ಣರಾಜ ಒಡೆಯರ ಆಡಳಿತದ ಸಾಮರ್ಥ್ಯವನ್ನು ಎತ್ತಿ ತೋರಿಸಿರುವುದು ಸ್ವಾರಸ್ಯಭರಿತವಾಗಿದೆ.

**4. "ತಾವು ಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ."**

**ಆಯ್ಕೆ:–** ಈ ವಾಕ್ಯವನ್ನು **'ಭಾಗ್ಯಶಿಲ್ಪಿಗಳು'** ಪಾಠದ ಭಾಗವಾಗಿ ಡಿ.ಎಸ್. ಜಯಪ್ಪಗೌಡ ಅವರು ರಚಿಸಿರುವ **'ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು'** ಎಂಬ ಕೃತಿಯಿಂದ ಆಯ್ದು ಕೊಟ್ಟಿರುವ **'ಸರ್.ಎಂ.ವಿಶ್ವೇಶ್ವರಯ್ಯ'** ಎಂಬ ಪಾಠಭಾಗದಿಂದ ಆರಿಸಲಾಗಿದೆ.

**ಸಂದರ್ಭ:–** ವಿಶ್ವೇಶ್ವರಯ್ಯನವರ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸಿದ್ದ ಭಾರತದ ಪ್ರಧಾನ ಮಂತ್ರಿಗಳಾದ ಪಂಡಿತ್ ಜವಾಹರಲಾಲ್ ನೆಹರೂ ಅವರು ಸರ್.ಎಂ.ವಿಶ್ವೇಶ್ವರಯ್ಯ ಅವರ ಬಗ್ಗೆ "ದುರದೃಷ್ಟವಶಾತ್ ಭಾರತೀಯರಾದ ನಾವು ಹೆಚ್ಚು ಮಾತನಾಡುವವರು ಮತ್ತು ನುಡಿದಂತೆ ನಡೆಯಲಾರದವರೆಂಬ ದೂಷಣೆಗೆ ಒಳಗಾಗಿದ್ದೇವೆ. ತಾವು ಈ ಮಾತಿಗೆ ಬಹುದೊಡ್ಡ ರೀತಿಯಲ್ಲಿ ಹೊರತಾಗಿದ್ದೀರಿ. **ತಾವು ಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ.** ಅದನ್ನು ನಾವು ತಮ್ಮಿಂದ ಕಲಿಯೋಣ". ಎಂದು ಹೇಳಿದ ಸಂದರ್ಭವಾಗಿದೆ.

**ಸ್ವಾರಸ್ಯ:–** ಈ ವಾಕ್ಯವು "ನುಡಿಗಿಂತ ನಡೆ ಲೇಸು" ಎಂಬ ಅರ್ಥದೊಂದಿಗೆ ವಿಶ್ವೇಶ್ವರಯ್ಯನವರ ವಾಸ್ತವ ಚಿಂತನೆ, ಕಾರ್ಯತತ್ಪರತೆ, ನಿಸ್ವಾರ್ಥನಡತೆಯನ್ನು ಸ್ವಾರಸ್ಯ ಭರಿತವಾಗಿ ವರ್ಣಿಸಿದೆ.

**ಉ) ಇಲ್ಲಿ ಬಿಟ್ಟಿರುವ ಪದಗಳನ್ನು ಸರಿಯಾದ ಪದಗಳಿಂದ ತುಂಬಿರಿ.**

1. ನಾಲ್ವಡಿ ಕೃಷ್ಣರಾಜ ಒಡೆಯರ್‌ರವರಿಗೆ ರೀಜೆಂಟರಾಗಿ ಕಾರ್ಯನಿರ್ವಹಿಸಿದವರು ಮಹಾರಾಣಿ ವಾಣಿವಿಲಾಸ ಅಮ್ಮನವರು.
2. 1914ರಲ್ಲಿ ಶಾಲಾ ಪ್ರವೇಶಕ್ಕೆ **ಜಾತಿ ಪರಿಗಣನೆಯ** ನಿಷೇಧವಾಯಿತು.
3. ವಿಶ್ವೇಶ್ವರಯ್ಯ ಅವರು ಮುಂಬೈ ಪ್ರಾಂತ್ಯದಲ್ಲಿ **ಸಹಾಯಕ ಎಂಜಿನಿಯರ್** ಆಗಿ ಸೇವೆ ಪ್ರಾರಂಭಿಸಿದರು.
4. ಮುಂಬೈ ಪ್ರಾಂತ್ಯದ ಗವರ್ನರ್ ಆಗಿದ್ದ **ಲಾರ್ಡ್‌ಸಂಡ್‌ಹರ್ಸ್ಟ್** ಅವರು ವಿಶ್ವೇಶ್ವರಯ್ಯ ಅವರನ್ನು ಮುಕ್ತಕಂಠದಿಂದ ಶ್ಲಾಘಿಸಿದರು.
5. ಭಾರತ ಸರಕಾರವು ವಿಶ್ವೇಶ್ವರಯ್ಯನವರಿಗೆ **ಭಾರತ ರತ್ನ** ಎಂಬ ಪ್ರಶಸ್ತಿ ನೀಡಿ ಗೌರವಿಸಿತು.

**ಭಾಷಾ ಚಟುವಟಿಕೆ**

**1. ಕೊಟ್ಟಿರುವ ಪದಗಳ ತತ್ಸಮ–ತದ್ಭವ ಬರೆಯಿರಿ.**

| | | | | |
|---|---|---|---|---|
| ವಂಶ – **ಬಂಚ** | ಸ್ಥಾನ – **ತಾಣ** | ಯಶ – **ಜಸ** | ಪಟ್ಟಣ – **ಪತ್ತನ** | ಕಾರ್ಯ – **ಕಜ್ಜ** |

**2. ನೀಡಿರುವ ಪದಗಳಲ್ಲಿ ಅನ್ಯದೇಶ್ಯ ಪದಗಳನ್ನು ಆರಿಸಿ ಬರೆಯಿರಿ.**

ಡಿಪ್ಲೊಮಾ, ಅಜಮಾಯಿಷಿ, ದಿವಾನ, ಪ್ರೌಢ, ಶಿಕ್ಷಣ, ನಡೆಸು, ಸೋಪು, ಕಾರ್ಖಾನೆ, ಕಾಗದ, ಕಚೇರಿ

ಅನ್ಯದೇಶ್ಯ ಪದಗಳು – ಡಿಪ್ಲೊಮಾ, ಅಜಮಾಯಿಷಿ, ದಿವಾನ, ಸೋಪು, ಕಾರ್ಖಾನೆ, ಕಾಗದ, ಕಚೇರಿ.

| | | |
|---|---|---|
| **ಡಿಪ್ಲೊಮಾ** – ಇಂಗ್ಲೀಷ್ | **ದಿವಾನ** – ಪರ್ಶಿಯನ್(ಪಾರ್ಶಿ) | **ಕಾರ್ಖಾನೆ** – ಹಿಂದುಸ್ಥಾನಿ |
| **ಸೋಪು** – ಇಂಗ್ಲೀಷ್ | **ಅಜಮಾಯಿಷಿ** – ಪರ್ಶಿಯನ್ (ಪಾರ್ಶಿ) | **ಕಾಗದ** – ಹಿಂದುಸ್ಥಾನಿ |